# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 733
ಸದಸ್ಯರ ಹೆಸರು : ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 25-09-2020.
ಉತ್ತರಿಸುವ ಸಚಿವರು : ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| 1 | ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ನಿರ್ಮಾಣಗೊಳ್ಳುತ್ತಿರುವ ಸುವರ್ಣ ಕನ್ನಡ ಸಮುಚ್ಚಯ ಭವನದ ಕಾಮಗಾರಿ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ನಿರ್ಮಾಣಗೊಳ್ಳುತ್ತಿರುವ ಸುವರ್ಣ ಸಾಂಸ್ಕೃತಿಕ ಸಮುಚ್ಚಯ ಭವನದ ಕಾಮಗಾರಿಯು ಅನುದಾನದ ಕೊರತೆಯಿಂದ ನೆನೆಗುದಿಗೆ ಬಿದ್ದಿದ್ದು, 2019-20ನೇ ಸಾಲಿನಲ್ಲಿ ರೂ.500.00 ಲಕ್ಷಗಳ ಅನುದಾನ ಮಂಜೂರು ಮಾಡಿ ಈ ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮ ವಹಿಸಲಾಗಿದೆ. |
| 2 | ಸದರಿ ಕಾಮಗಾರಿ ಅನುಮೋದನೆಗೊಂಡ ವರ್ಷ ಯಾವುದು; | ಸದರಿ ಕಾಮಗಾರಿಯು 2005-06 ನೇ ಸಾಲಿನಲ್ಲಿ ಅನುಮೋದನೆಗೊಂಡಿರುತ್ತದೆ. |
| 3 | ಸದರಿ ಕಾಮಗಾರಿಗೆ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನ ಎಷ್ಟು; (ಸಂಪೂರ್ಣ ವಿವರ ನೀಡುವುದು) | ಸದರಿ ಕಾಮಗಾರಿಗೆ ಈ ಕೆಳಕಂಡ ಸಾಲುಗಳಲ್ಲಿ ಒಟ್ಟು ರೂ.807.00 ಲಕ್ಷಗಳು ಬಿಡುಗಡೆ ಮಾಡಲಾಗಿದೆ.<br><br>2005-06ನೇ ಸಾಲಿನಲ್ಲಿ ರೂ.57.00 ಲಕ್ಷ<br>2006-07ನೇ ಸಾಲಿನಲ್ಲಿ ರೂ.50.00 ಲಕ್ಷ<br>2017-18ನೇ ಸಾಲಿನಲ್ಲಿ ರೂ.200.00 ಲಕ್ಷ<br>2019-20ನೇ ಸಾಲಿನಲ್ಲಿ ರೂ.500.00 ಲಕ್ಷ<br>ಒಟ್ಟು ರೂ.807.00 ಲಕ್ಷ |
| 4 | ಪ್ರಸ್ತುತ ಕಾಮಗಾರಿಯು ಯಾವ ಹಂತದಲ್ಲಿದೆ ಹಾಗೂ ವಿಳಂಬಕ್ಕೆ ಕಾರಣಗಳೇನು; | ಪ್ರಸ್ತುತ ಸುವರ್ಣ ಸಾಂಸ್ಕೃತಿಕ ಸಮುಚ್ಚಯ ನಿರ್ಮಾಣ ಕಾಮಗಾರಿಯ ನೆಲಮಹಡಿ, ಮೊದಲನೆಯ ಮಹಡಿ ಪೂರ್ಣಗೊಂಡಿದ್ದು, ಎರಡನೆಯ ಮಹಡಿ ಸ್ಲ್ಯಾಬ್ ಹಂತಕ್ಕೆ ಬಂದಿದ್ದು, ಕಾಮಗಾರಿ ಪ್ರಗತಿಯಲ್ಲಿದೆ.<br>ಅನುದಾನ ಲಭ್ಯತೆ ಇಲ್ಲದೇ ಇದ್ದ ಕಾರಣ ಉಳಿಕೆ ಕಾಮಗಾರಿಯನ್ನು ಪೂರ್ಣಗೊಳಿಸಲು ವಿಳಂಬವಾಗಿದ್ದು, ಪ್ರಸ್ತುತ ಕರ್ನಾಟಕ ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರದಿಂದ 2019-20ನೇ ಸಾಲಿನಲ್ಲಿ ರೂ. 500.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. |
| 5 | ಯಾವ ಕಾಲಮಿತಿಯೊಳಗೆ ಈ ಕಾಮಗಾರಿಯನ್ನು ಪೂರ್ಣಗೊಳಿಸಿ ಲೋಕಾರ್ಪಣೆಗೊಳಿಸಲಾಗುವುದು? | ಶೀಘ್ರದಲ್ಲಿ ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಿ ಲೋಕಾರ್ಪಣೆ ಮಾಡಲಾಗುವುದು. |

ಕಸಂಪ್ರಾ 90 ಕವಿಸ 2020

(ಸಿ.ಟಿ.ರವಿ)
ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ,
ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಚಿವರು